ಕರ್ನಾಟಕ ಸರ್ಕಾರ

44644335

ಸಂಖ್ಯೆ: ಮುಕಾ: :2022.

ಕರ್ನಾಟಕ ಸರ್ಕಾರದ ಸಚಿವಾಲಯ,
ಕೊ.ಸಂ.320, ವಿಧಾನಸೌಧ,
ಬೆಂಗಳೂರು, ದಿನಾಂಕ: 25.07.2022

**ಸುತ್ತೋಲೆ**

ವಿಷಯ: ರಾಜ್ಯ ಸರ್ಕಾರಿ ನೌಕರರು ಕಛೇರಿಗೆ ನಿಗದಿತ ಅವಧಿಗೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಕಛೇರಿಯಲ್ಲಿ ಕಾರ್ಯ ನಿರ್ವಹಿಸಲು -ಸೂಚನೆ.

*****

ರಾಜ್ಯ ಸರ್ಕಾರದ ಕಛೇರಿಗಳಲ್ಲಿ ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಾರ್ಯನಿಷ್ಠೆಯನ್ನು ತೋರಲು ಈಗಾಗಲೇ ಸರ್ಕಾರವು ಸಾಕಷ್ಟು ಸುತ್ತೋಲೆಗಳಲ್ಲಿ ಸೂಚನೆಗಳನ್ನು ನೀಡಿರುತ್ತದೆ.

ಆದಾಗ್ಯೂ, ಸರ್ಕಾರಿ ನೌಕರರು/ಅಧಿಕಾರಿಗಳಲ್ಲಿ ಸಮಯ ಪ್ರಜ್ಞೆ ಮತ್ತು ಕಾರ್ಯನಿಷ್ಠೆಯ ಕೊರತೆಯನ್ನು ಇತ್ತೀಚಿನ ದಿನಗಳಲ್ಲಿ ಅವಲೋಕಿಸಲಾಗಿದೆ.

ಸಾರ್ವಜನಿಕರು ದೂರದ ಸ್ಥಳಗಳಿಂದ ಸರ್ಕಾರಿ ಕಛೇರಿಯಲ್ಲಿನ ತಮ್ಮ ಕಾರ್ಯಗಳಿಗೆ ಬೆಳಗ್ಗೆ ನಿಗದಿತ ಅವಧಿಗೆ ಸರ್ಕಾರದ ಕಛೇರಿಗಳಿಗೆ ಭೇಟಿ ನೀಡಿದಾಗ ಬಹುತೇಕ ಕಛೇರಿಗಳಲ್ಲಿ ಸಿಬ್ಬಂದಿಗಳು/ಅಧಿಕಾರಿಗಳು ಕಛೇರಿಗೆ ಹಾಜರಾಗಿಲ್ಲದೇ ಇರುವ ಕಾರಣ ಸಾಮಾನ್ಯ ಜನರು ಬವಣೆ ಪಡುವಂತಾಗಿದೆ.

ಈ ಹಿನ್ನೆಲೆಯಲ್ಲಿ, ಸರ್ಕಾರದ ಕಛೇರಿಯ ಪ್ರಾರಂಭದ ಸಮಯ ಬೆಳಗ್ಗೆ 10.00ಗಂಟೆಗೆ ಕಡ್ಡಾಯವಾಗಿ ಹಾಜರಾಗುವುದು ಹಾಗೂ ಕಛೇರಿ ಅವಧಿ ಪೂರ್ಣವಾಗುವವರೆಗೆ ತಮಗೆ ನಿಗದಿಪಡಿಸಿದ ಸ್ಥಾನದಲ್ಲಿ ಇದ್ದು, ಕರ್ತವ್ಯ ನಿರ್ವಹಿಸತಕ್ಕದ್ದು. ಕಛೇರಿ ಅವಧಿಯಲ್ಲಿ ನೌಕರರು/ಅಧಿಕಾರಿಗಳು ಅನ್ಯ ಕರ್ತವ್ಯದ ಮೇರೆಗೆ ತೆರಳಬೇಕಾಗಿದ್ದಲ್ಲಿ, ಚಲನ-ವಲನ ವಹಿಯಲ್ಲಿ ಸಕಾರಣವನ್ನು ನಮೂದಿಸಿ, ಮೇಲಾಧಿಕಾರಿಗಳ ಪೂರ್ವಾನುಮತಿಯನ್ನು ಪಡೆಯತಕ್ಕದ್ದು. ನಿಗದಿತ ಕಾಲಾವಧಿಗಿಂತ ವಿಳಂಬವಾಗಿ ಹಾಜರಾಗುವ ಹಾಗೂ ಕಛೇರಿ ಅವಧಿಯಲ್ಲಿ ಸ್ವಸ್ಥಾನದಲ್ಲಿ ಇಲ್ಲದ /ಚಲನ-ವಲನ ವಹಿಯಲ್ಲಿ ನಮೂದಿಸಿ, ಮೇಲಾಧಿಕಾರಿಗಳ ಅನುಮತಿ ಪಡೆದಿಲ್ಲದ ನೌಕರರು:ಅಧಿಕಾರಿಗಳ ವಿರುದ್ಧ ಸಕ್ಷಮ ಪ್ರಾಧಿಕಾರವು ಸೂಕ್ತ ಶಿಸ್ತು ಕ್ರಮ ಜರುಗಿಸತಕ್ಕದ್ದು.

ವಂದಿತಾ

(ವಂದಿತಾ ಶರ್ಮಾ)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ :

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
3. ಎಲ್ಲಾ ಕ್ಷೇತ್ರ ಇಲಾಖೆಗಳ ಮುಖ್ಯಸ್ಥರು – ಆಯಾ ಇಲಾಖೆಗಳ ಕಾರ್ಯದರ್ಶಿಗಳ ಮೂಲಕ.
4. ರಕ್ಷಾ ಕಡತ/ ಬಿಡಿ ಪ್ರತಿಗಳು.

Scanned with CamScanner